# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1. | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 113 |
| 2. | ಸದಸ್ಯರ ಹೆಸರು | : | ಶ್ರೀ ಎಸ್.ನಾಗರಾಜ್ (ಸಂದೇಶ್ ನಾಗರಾಜ್) |
| 3. | ಉತ್ತರಿಸಬೇಕಾದ ದಿನಾಂಕ | : | 11-12-2018 |

| ಕ್ರ ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ | ಕೃಷ್ಣರಾಜಸಾಗರ ಜಲಾಶಯದ ಬೃಂದಾವನ ಉದ್ಯಾನವನವನ್ನು ಡಿಸ್ನಿ ಲ್ಯಾಂಡ್ ಮಾದರಿಯಲ್ಲಿ ಅಭಿವೃದ್ಧಿಪಡಿಸಲು ಯಾವ ಯಾವ ಯೋಜನೆಗಳನ್ನು ರೂಪಿಸಲಾಗುತ್ತಿದೆ; (ವಿವರಗಳನ್ನು ಒದಗಿಸುವುದು) | ಕೃಷ್ಣರಾಜಸಾಗರ ಜಲಾಶಯದ ಕೆಳಭಾಗದಲ್ಲಿ ಬೃಂದಾವನ ಉದ್ಯಾನವನವನ್ನು ಅಂತರರಾಷ್ಟ್ರೀಯ ಮಟ್ಟಕ್ಕೆ ಡಿಸ್ನಿಲ್ಯಾಂಡ್ ಮಾದರಿಯಲ್ಲಿ ಅಭಿವೃದ್ಧಿಪಡಿಸಲು ಯೋಜನಾ ವರದಿಯನ್ನು ಕಾವೇರಿ ನೀರಾವರಿ ನಿಗಮದಿಂದ ತಯಾರಿಸಲಾಗಿರುತ್ತದೆ. ಇದು ಪರಿಶೀಲನೆಯಲ್ಲಿರುತ್ತದೆ. |
| ಆ | ಕಳೆದ ಎರಡೂ ಸಾಲಿನ ಆಯವ್ಯಯ ಪತ್ರಗಳಲ್ಲಿ ಕೃಷ್ಣರಾಜಸಾಗರ ಜಲಾಶಯದ ಬೃಂದಾವನ ಉದ್ಯಾನವನವನ್ನು ಸಮಗ್ರವಾಗಿ ಅಭಿವೃದ್ಧಿ ಪಡಿಸುವ ಬಗ್ಗೆ ಪ್ರಸ್ತಾಪಗಳನ್ನು ಮಾಡಲಾಗಿದೆಯೇ; (ವಿವರ ಒದಗಿಸುವುದು) | ಬೃಂದಾವನ ಉದ್ಯಾನವನವನ್ನು ಸಮಗ್ರವಾಗಿ ಅಭಿವೃದ್ಧಿಪಡಿಸಲು 2015-16 ನೇ ಸಾಲಿನ ಆಯವ್ಯಯದಲ್ಲಿ "ಕೆ.ಆರ್.ಎಸ್ ಜಲಾಶಯದ ಬೃಂದಾವನ ಉದ್ಯಾನವನವನ್ನು ಆಧುನಿಕ ತಂತ್ರಜ್ಞಾನ ಬಳಸಿ ವಿಶ್ವ ದರ್ಜೆಗೆ ಏರಿಸಲಾಗುವುದು" ಎಂದು ಘೋಷಿಸಲಾಗಿರುತ್ತದೆ. ಅದರಂತೆ, ಸದರಿ ಯೋಜನೆಯ ವಿವರವಾದ ಯೋಜನಾ ವರದಿಯನ್ನು ತಯಾರಿಸಲು ಟೆಂಡರ್ ಮೂಲಕ ಸಮಾಲೋಚಕರಾದ ಮೆ॥ ಸಿನ್ನಿಯರ್ ಆರ್ಕಿಟೆಕ್ಟ್‌ರವರಿಗೆ ಕಾಮಗಾರಿಯನ್ನು ವಹಿಸಲಾಗಿರುತ್ತದೆ.<br>ಅಲ್ಲದೆ, 2018-19 ನೇ ಸಾಲಿನ ಆಯವ್ಯಯದಲ್ಲಿ "ಕೃಷ್ಣರಾಜಸಾಗರ ಅಣೆಕಟ್ಟೆಯ ಬೃಂದಾವನವು ಎಂಭತ್ತರ ದಶಕದಲ್ಲಿ ರಾಷ್ಟ್ರ ಖ್ಯಾತಿಗಳಿಸಿತ್ತು. ಇತ್ತೀಚಿನ ವರ್ಷಗಳಲ್ಲಿ ಇದು ಕಳೆಗುಂದಿದೆ. ಇದರ ವೈಭವವನ್ನು ಮರುಕಳಿಸಲು ಸರ್ಕಾರ ಉದ್ದೇಶಿಸಿದ್ದು, ಸಾರ್ವಜನಿಕ-ಖಾಸಗಿ ಸಹಭಾಗಿತ್ವದಲ್ಲಿ ಅಮೆರಿಕಾದ ಡಿಸ್ನಿಲ್ಯಾಂಡ್ ಮಾದರಿಯಲ್ಲಿ ಕೆ.ಆರ್.ಎಸ್ ಅನ್ನು ಅಭಿವೃದ್ಧಿಪಡಿಸಲಾಗುವುದು. ಈ ಯೋಜನೆಗೆ ಬಂಡವಾಳ ಹೂಡಲು ವಿಶ್ವಮಟ್ಟದ ಉದ್ಯಮಿಗಳು ಉತ್ಸುಕರಾಗಿದ್ದಾರೆ. ಇದರ ವಿವರವಾದ ಕಾರ್ಯ ಯೋಜನೆ ಸಿದ್ಧಪಡಿಸಲು ರೂ.5.00 ಕೋಟಿಗಳನ್ನು ಒದಗಿಸಲಾಗುವುದು" ಎಂದು ಘೋಷಿಸಲಾಗಿರುತ್ತದೆ. |
| ಇ | ಈ ಪ್ರಸ್ತಾವನೆಗಳ ಜಾರಿಗೆ ಕ್ರಮ ತೆಗೆದುಕೊಳ್ಳಲಾಗಿದೆಯೇ? | ಸದರಿ ಪ್ರಸ್ತಾವನೆಯ ಜಾರಿಗೆ ಕ್ರಮ ತೆಗೆದುಕೊಳ್ಳಲಾಗಿದೆ. ಪ್ರಸ್ತುತ ಕೃಷ್ಣರಾಜಸಾಗರ ಬೃಂದಾವನ ಉದ್ಯಾನವನವನ್ನು ವಿಶ್ವದರ್ಜೆಗೆ ಉನ್ನತೀಕರಣಗೊಳಿಸುವ ಕಾಮಗಾರಿಯ ರೂ.1425.00 ಕೋಟಿ ಮೊತ್ತದ ಯೋಜನಾ ವರದಿಯನ್ನು ತಯಾರಿಸಲಾಗಿದ್ದು, ನಿಗಮದ ಹಂತದಲ್ಲಿ ಪರಿಶೀಲನೆಯಲ್ಲಿದೆ. ಸದರಿ ಯೋಜನೆಯನ್ನು ಸಾರ್ವಜನಿಕ ಖಾಸಗಿ ಪಾಲುದಾರಿಕೆ (ಪಿಪಿಪಿ) ಮಾದರಿಯಲ್ಲಿ ಅನುಷ್ಠಾನಗೊಳಿಸಲು ಉದ್ದೇಶಿಸಲಾಗಿದೆ. |

ಸಂಖ್ಯೆ:ಜಸಂಇ 57 ಎನ್‌ಎಲ್‌ಎ 2018

(ಡಿ.ಕೆ.ಶಿವಕುಮಾರ್)

ಜಲ ಸಂಪನ್ಮೂಲ ಸಚಿವರು